# ಗಿಡ ನೆಡುವ ಮೂಲಕ ಪರಿಸರ ದಿನಾಚರಣೆ



ಪಾಂಡವಪುರ : ಜಾಗತಿಕ ತಾಪಮಾನವನ್ನು ಕಡಿಮೆ ಮಾಡಿ ಪರಿಸರದ ಅಸಮತೋಲನ ಕಾಪಾಡಬೇಕಾದುದು ಸಾರ್ವಜನಿಕರ ಆಧ್ಯ ಕರ್ತವ್ಯವಾಗಿದೆ ಎಂದು ಬಿಜೆಪಿ ಹಿರಿಯ ಮುಖಂಡ ರೈಸ್‌ಮಿಲ್ ತಮ್ಮಣ್ಣ (ವೆಂಕಟರಮಣೇಗೌಡ) ಹೇಳಿದರು.

ಪಟ್ಟಣದ ಎಂಎಸ್‌ಐಎಲ್ ಗೋದಾಮು ಬಳಿ ಇರುವ ತಮ್ಮ ಭೂಮಿಯಲ್ಲಿ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಅರಣ್ಯ ಇಲಾಖೆ ಸಹಯೋಗದೊಂದಿಗೆ ಗಿಡ ನೆಟ್ಟು ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಗಿಡ-ಮರಗಳನ್ನು ಬೇಕಾಬಿಟ್ಟಿಯಾಗಿ ಕಡಿಯುತ್ತಿರುವುದರಿಂದ ಪರಿಸರ ನಾಶವಾಗುತ್ತಿದೆ. ಇದರಿಂದಾಗಿ ಜಾಗತಿಕ ತಾಪಮಾನ ಹೆಚ್ಚಾಗುತ್ತಿದೆ. ಆದ್ದರಿಂದ ಪ್ರತಿ ಮನೆಗೊಬ್ಬರೂ ತಮ್ಮ ಸುತ್ತಮುತ್ತಲ ಪರಿಸರದಲ್ಲಿ ಎರಡೆರಡು ಗಿಡಗಳನ್ನು ನೆಟ್ಟು ಸಾಮಾಜಿಕ ಕಳಕಳಿ ಪ್ರದರ್ಶಿಸುವ ಜತೆಗೆ ಪರಿಸರ ಸಂರಕ್ಷಣೆ ಮಾಡಬೇಕು ಎಂದರು.

ಈ ವೇಳೆ ಮಹಾಗನಿ, ಸಿಲ್ವರ್ ಸೇರಿದಂತೆ ವಿವಿಧ ರೀತಿಯ ಗಿಡಗಳನ್ನು ನೆಟ್ಟು ನೀರುಣಿಸಲಾಯಿತು. ಬಿಜೆಪಿ ಕ್ಷೇತ್ರಾಧ್ಯಕ್ಷ ಎಲ್.ಅಶೋಕ್, ಪ್ರಧಾನ ಕಾರ್ಯದರ್ಶಿಗಳಾದ ಕೆನ್ನಾಳು ಕಾಂತರಾಜು, ನೀಲನಹಳ್ಳಿ ಧನಂಜಯ, ವಲಯ ಅರಣ್ಯಾಧಿಕಾರಿ ಪುಟ್ಟಸ್ವಾಮಿ, ಬಿಜೆಪಿ ಮುಖಂಡರಾದ ಎಂ.ರಾಜಕುಮಾರ್, ವೇಣುಗೋಪಾಲ್, ಫೋಟೋ ಸುಬ್ರಹ್ಮಣ್ಯ, ಅರುಣ್, ಅರಣ್ಯ ಇಲಾಖೆ ನೌಕರರ ಶೇಖರ್ ಇತರರಿದ್ದರು.

ರೈತಸಂಘದಿಂದ ಪರಿಸರ ಜಾಗೃತಿ : ತಾಲೂಕಿನ ಕ್ಯಾತನಹಳ್ಳಿ ಗ್ರಾಮದಲ್ಲಿ ಆಧುನಿಕಗೊಂಡಿರುವ ಸರ್ಕಾರಿ ಸಮುದಾಯ ಆಸ್ಪತ್ರೆಯ ಆವರಣದಲ್ಲಿ ರೈತ ‘ಸಂಘದಿಂದ ಗಿಡ ನೆಟ್ಟು ವಿಶ್ವ ಪರಿಸರ ದಿನಾಚರಣೆ ಆಚರಣೆ ಮಾಡಲಾಯಿತು.

ಹಿರಿಯ ರೈತ ಮುಖಂಡ ಕೆ.ಟಿ.ಗೋವಿಂದೇಗೌಡ ಅವರ ನೇತೃತ್ವದಲ್ಲಿ ವಿವಿಧ ರೀತಿಯ ಗಿಡಳನ್ನು ನೆಡುವ ಮೂಲಕ ಸಾರ್ವಜನಿಕರಲ್ಲಿ ಪರಿಸರ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಕೆ.ಪಿ.ಶೀಲಾ, ರೈತಸಂಘದ ಯುವ ಮುಖಂಡರಾದ ಎಣ್ಣೆಹೊಳೆಕೊಪ್ಪಲು ಮಂಜುನಾಥ್, ರಘು, ತುಳಸೀದಾಸ್, ಗ್ರಾ.ಪಂ ಸದಸ್ಯರು, ಆಶಾ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತೆಯರು ಇತರರಿದ್ದರು.

Scanned with CamScanner